# ಪೇತ್ರನು ಬರೆದ ಎರಡನೆಯ ಪತ್ರ

## ಮುನ್ನುಡಿ

ಪೇತ್ರನು ಬರೆದ ಈ ಎರಡನೆಯ ಪತ್ರ ಅಂದಿನ ಕ್ರೈಸ್ತಸಭೆಗಳನ್ನು ಉದ್ದೇಶಿಸಿ ಕ್ರೈಸ್ತಭಕ್ತಾದಿಗಳಿಗೆ ಎಚ್ಚರಿಕೆ ನೀಡಲು ಬರೆಯಲಾದುದು. ಇದನ್ನು ಬರೆದ ಸಂದರ್ಭದಲ್ಲಿ ಅನೇಕರು ತಮ್ಮ ಹುಸಿ ಬೋಧನೆಯಿಂದ ವಿಶ್ವಾಸಿಗಳನ್ನು ಮರುಳುಗೊಳಿಸಿ, ಅನೈತಿಕತೆಯ ಮಾರ್ಗಕ್ಕೆ ಎಳೆಯುತ್ತಿದ್ದರು. ಇಂಥ ಸಂದರ್ಭಗಳಲ್ಲಿ ಭಕ್ತಾದಿಗಳು, ಕ್ರಿಸ್ತೇಸುವನ್ನು ಕಣ್ಣಾರೆಕಂಡು, ಅವರ ಬೋಧನೆಯನ್ನು ಕಿವಿಯಾರೆ ಕೇಳಿ, ಅವರೊಡನೆ ಜೀವಿಸಿದ ವ್ಯಕ್ತಿಗಳ ಸಂಪರ್ಕವನ್ನಿಟ್ಟುಕೊಳ್ಳಬೇಕು. ದೇವರ ಹಾಗೂ ಕ್ರಿಸ್ತೇಸುವಿನ ನಿಜವಾದ ಜ್ಞಾನವನ್ನು ಪಡೆಯಲೆತ್ನಿಸಬೇಕು ಎಂದು ಲೇಖಕನು ಹುರಿದುಂಬಿಸುತ್ತಾನೆ.

ಜನರು ನಿರೀಕ್ಷಿಸಿದ್ದಂತೆ ಯೇಸುಸ್ವಾಮಿ ಶೀಘ್ರದಲ್ಲೇ ಪುನರಾಗಮಿಸುವುದಿಲ್ಲವೆಂದು ಕೆಲವರು ಪ್ರಚಾರ ಮಾಡುತ್ತಿದ್ದರು. ಇದಕ್ಕೆ ಪ್ರತಿಯಾಗಿ, "ಯಾರೊಬ್ಬನೂ ನಾಶವಾಗದೆ ಎಲ್ಲರೂ ಪಾಪವನ್ನು ಪರಿತ್ಯಜಿಸಿ, ಪ್ರಭುವಿಗೆ ಅಭಿಮುಖರಾಗಬೇಕು" ಎಂಬ ಉದ್ದೇಶದಿಂದ ಯೇಸುವಿನ ಪುನರಾಗಮನ ತಡವಾಗುತ್ತಿದೆ ಎಂದು ಲೇಖಕನು ಸಮರ್ಥಿಸುತ್ತಾನೆ.

**ಪರಿವಿಡಿ**


| | | |
|---|---|---|
| ಪೀಠಿಕೆ | – | 1.1 –1.2 |
| ಕ್ರೈಸ್ತ ಕರೆ | – | 1.3 – 1.21 |
| ಹುಸಿ ಬೋಧಕರು | – | 2.1 – 2.22 |
| ಯೇಸುವಿನ ಪುನರಾಗಮನ | – | 3.1 – 3.18 |


### ಪೀಠಿಕೆ

**1** ನಮ್ಮ ದೇವರ ಮತ್ತು ಉದ್ಧಾರಕ ಯೇಸುಕ್ರಿಸ್ತರ ಸತ್ಸಂಬಂಧದ ಮೂಲಕ ನಮ್ಮಂತೆಯೇ ಅಮೂಲ್ಯವಾದ
ವಿಶ್ವಾಸವನ್ನು ಹೊಂದಿರುವ ಭಕ್ತಾದಿಗಳಿಗೆ – ಯೇಸುಕ್ರಿಸ್ತರ ದಾಸನೂ ಪ್ರೇಷಿತನೂ ಆದ ಸಿಮೋನ ಪೇತ್ರನು
ಬರೆಯುವ ಪತ್ರ :
2 ದೇವರ ಮತ್ತು ಪ್ರಭು ಯೇಸುಕ್ರಿಸ್ತರ ಬಗ್ಗೆ ನೀವು ಪಡೆಯುತ್ತಿರುವ ಜ್ಞಾನಾರ್ಜನೆಯು ನಿಮಗೆ
ಕೃಪಾಶೀರ್ವಾದವನ್ನೂ ಶಾಂತಿ ಸಮಾಧಾನವನ್ನೂ ಅಧಿಕಾಧಿಕವಾಗಿ ತರಲಿ !

### ದೇವರಿಂದ ಕರೆ ಮತ್ತು ಆಯ್ಕೆ

3 ತಮ್ಮ ಸ್ವಂತ ಮಹಿಮೆಯಲ್ಲೂ ಸೌಭಾಗ್ಯದಲ್ಲೂ ಭಾಗಿಗಳಾಗಲು ದೇವರು ನಮ್ಮನ್ನು ಕರೆದಿದ್ದಾರೆ.
ಅವರನ್ನು ಅರಿತುಕೊಳ್ಳುವುದರ ಮೂಲಕ ನಾವು ಭಕ್ತಿಯುತ ಜೀವನವನ್ನು ನಡೆಸಲು ಬೇಕಾದುದೆಲ್ಲವನ್ನೂ
ಆ ಯೇಸುವಿನ ದಿವ್ಯಶಕ್ತಿಯಿಂದ ಪಡೆದಿದ್ದೇವೆ. 4ಹೀಗೆ ನೀವು ಲೋಕದಲ್ಲಿ ಆಶಾಪಾಶಗಳಿಂದ ಉಂಟಾಗುವ
ಭ್ರಷ್ಟಾಚಾರದಿಂದ ತಪ್ಪಿಸಿಕೊಂಡು ದೈವಿಕ ಸ್ವಭಾವದಲ್ಲಿ ಪಾಲುಗಾರರಾಗುವಂತೆ, ದೇವರು ಅಮೂಲ್ಯವೂ
ಅತ್ಯುತ್ತಮವೂ ಆದ ವಾಗ್ದಾನಗಳನ್ನು ಅನುಗ್ರಹಿಸಿದ್ದಾರೆ. 5ಈ ಕಾರಣ, ನೀವು ಪೂರ್ಣಾಸಕ್ತಿಯಿಂದ ನಿಮ್ಮ
ವಿಶ್ವಾಸಕ್ಕೆ ಸದ್ಗುಣವನ್ನು, ಸದ್ಗುಣಕ್ಕೆ ಸುಜ್ಞಾನವನ್ನು ಸೇರಿಸಿರಿ. 6ಸುಜ್ಞಾನಕ್ಕೆ ಸಂಯಮವನ್ನು, ಸಂಯಮಕ್ಕೆ

ಸ್ಥೈರ್ಯವನ್ನು, ಸ್ಥೈರ್ಯಕ್ಕೆ ಸದ್ಭಕ್ತಿಯನ್ನು ಕೂಡಿಸಿರಿ. 7ಈ ನಿಮ್ಮ ಸದ್ಭಕ್ತಿಗೆ ಸೋದರ ಸ್ನೇಹವನ್ನು, ಸೋದರ
ಸ್ನೇಹಕ್ಕೆ ಪ್ರೀತಿಯನ್ನು ಬೆರೆಸಿರಿ. 8ಈ ಗುಣಗಳು ನಿಮ್ಮಲ್ಲಿ ಬೆಳೆದು ಸಮೃದ್ಧವಾಗಿದ್ದರೆ, ನಮ್ಮ ಪ್ರಭು
ಯೇಸಕ್ರಿಸ್ತರನ್ನು ಅರಿತು ಬಾಳುವುದರಲ್ಲಿ ಇವು ನಿಮ್ಮನ್ನು ಚೈತನ್ಯಪೂರ್ಣರನ್ನಾಗಿಯೂ
ಫಲಪ್ರದರನ್ನಾಗಿಯೂ ಮಾಡುತ್ತವೆ. 9ಈ ಗುಣಗಳಿಲ್ಲದವನು ಸಂಕುಚಿತ ಮನೋಭಾವನೆಯುಳ್ಳವನು
ಹಾಗೂ ಅಂಧನು. ಹಿಂದಿನ ಪಾಪಗಳಿಂದ ತಾನು ಶುದ್ಧಗೊಂಡವನು ಎಂಬುದನ್ನು ಮರೆತುಬಿಟ್ಟವನು.

10 ಸಹೋದರರೇ, ನೀವು ದೇವರಿಂದ ಕರೆ ಹೊಂದಿದವರು; ದೇವರಿಂದ ಆಯ್ಕೆಯಾದವರು. ಈ
ವರದಲ್ಲಿ ದೃಢವಾಗಿರಲು ಮತ್ತಷ್ಟು ಪ್ರಯತ್ನಿಸಿರಿ. ಹೀಗೆ ಮಾಡಿದರೆ, ನೀವೆಂದಿಗೂ ವಿಶ್ವಾಸಭ್ರಷ್ಟರಾಗಲಾರಿರಿ.
11ನಮ್ಮ ಪ್ರಭು ಹಾಗೂ ಉದ್ಧಾರಕ ಯೇಸುಕ್ರಿಸ್ತರ ಅಮರ ರಾಜ್ಯವನ್ನು ಪ್ರವೇಶಿಸುವ ಭಾಗ್ಯವನ್ನು ದೇವರು
ನಿಮಗೆ ಧಾರಾಳವಾಗಿ ಅನುಗ್ರಹಿಸುವರು.

12 ಈ ವಿಷಯಗಳೆಲ್ಲಾ ನಿಮಗೆ ತಿಳಿದೇ ಇವೆ; ನೀವು ಅಂಗೀಕರಿಸಿದ ಸತ್ಯದಲ್ಲಿ ಸ್ಥಿರವಾಗಿಯೂ
ಇದ್ದೀರಿ. ಆದರೂ ಇವುಗಳನ್ನು ಪದೇಪದೇ ನಿಮ್ಮ ಜ್ಞಾಪಕಕ್ಕೆ ತರಲು ಅಪೇಕ್ಷಿಸುತ್ತೇನೆ. 13ನಾನು ಈ
ದೇಹವೆಂಬ ಗುಡಾರದಲ್ಲಿ ಜೀವಿಸಿರುವ ತನಕ ನಿಮ್ಮನ್ನು ಜ್ಞಾಪಕಪಡಿಸಿ, ಪ್ರೋತ್ಸಾಹಿಸುವುದು ಉಚಿತವೆಂದು
ಎಣಿಸಿದ್ದೇನೆ. 14ನಾನು ಈ ಗುಡಾರವನ್ನು ತ್ಯಜಿಸುವ ಕಾಲವು ಸಮೀಪಿಸಿತೆಂದು ಬಲ್ಲೆ. ನಮ್ಮ ಪ್ರಭು
ಯೇಸುಕ್ರಿಸ್ತರೇ ನನಗಿದನ್ನು ಸ್ಪಷ್ಟಪಡಿಸಿದ್ದಾರೆ. 15ನನ್ನ ಮರಣಾ ನಂತರವೂ ಈ ವಿಷಯಗಳನ್ನು ನೀವು
ಯಾವಾಗಲೂ ಜ್ಞಾಪಕಕ್ಕೆ ತಂದುಕೊಳ್ಳಲು ಸಾಧ್ಯವಾಗುವಂತೆ ಈಗಲೇ ನನ್ನಿಂದಾದಷ್ಟು ಪ್ರಯತ್ನಿಸುತ್ತೇನೆ.

### ಕ್ರಿಸ್ತ ಮಹಿಮೆಯನ್ನು ಕಂಡವರ ಸಾಕ್ಷ್ಯ

16 ನಮ್ಮ ಪ್ರಭು ಯೇಸುಕ್ರಿಸ್ತರ ಶಕ್ತಿ ಸಾಮರ್ಥ್ಯವನ್ನು ಮತ್ತು ಅವರ ಪುನರಾಗಮನವನ್ನು ನಿಮಗೆ
ತಿಳಿಯಪಡಿಸುವಾಗ ಚಮತ್ಕಾರದಿಂದ ಕಲ್ಪಿಸಿದ ಕಟ್ಟುಕತೆಗಳನ್ನು ಆಧರಿಸಿ ನಾವು ಮಾತನಾಡಲಿಲ್ಲ. ನಾವೇ
ಅವರ ಮಹತ್ತನ್ನು ಕಣ್ಣಾರೆಕಂಡು ಅದನ್ನು ತಿಳಿಯಪಡಿಸಿದ್ದೇವೆ. 17ತಂದೆಯಾದ ದೇವರಿಂದ ಅವರು
ಗೌರವವನ್ನೂ ಮಹಿಮೆಯನ್ನೂ ಪಡೆದಾಗ, "ಈತನು ನನ್ನ ಪುತ್ರ, ನನಗೆ ಪ್ರಿಯನಾದವನು; ನನ್ನ ಅಪಾರ
ಮೆಚ್ಚುಗೆಗೆ ಪಾತ್ರನು," ಎಂದು ಅವರನ್ನು ಕುರಿತೇ ವಾಣಿಯೊಂದು ಮಹೋನ್ನತ ವೈಭವದಿಂದ
ಕೇಳಿಬಂದಿತು. 18ಆಗ ನಾವು ಆ ಪುನೀತ ಪರ್ವತದ ಮೇಲೆ ಅವರೊಡನೆ ಇದ್ದೆವು; ಸ್ವರ್ಗದಿಂದ ಆ
ವಾಣಿಯನ್ನು ನಾವು ಕೇಳಿದೆವು.

19 ಆದ್ದರಿಂದ ಪ್ರವಾದನೆಯ ಸಂದೇಶವು ನಮಗೆ ಮತ್ತಷ್ಟು ಖಚಿತವಾಗಿ ಗೊತ್ತಾಗಿದೆ. ಇದನ್ನು
ನೀವು ಕತ್ತಲಲ್ಲಿ ಬೆಳಗುವ ದೀಪವೆಂದು ಪರಿಗಣಿಸಿ ಲಕ್ಷ್ಯಕೊಟ್ಟರೆ ಒಳ್ಳೆಯದು. ನಿಮ್ಮ ಹೃದಯದಲ್ಲಿ ಬೆಳಕು
ಹರಿದು ಅರುಣೋದಯದ ನಕ್ಷತ್ರವು ಮೂಡುವವರೆಗೂ ಈ ದೀಪವು ಬೆಳಗುತ್ತಿರುತ್ತದೆ. 20ಆದರೆ, ಇದನ್ನು
ನೀವು ಮುಖ್ಯವಾಗಿ ಜ್ಞಾಪಕದಲ್ಲಿಡಬೇಕು: ಪವಿತ್ರಗ್ರಂಥದಲ್ಲಿರುವ ಯಾವ ಪ್ರವಾದನೆಯೂ ವೈಯಕ್ತಿಕ
ವ್ಯಾಖ್ಯಾನದ ವಿಷಯವಲ್ಲ. 21ಏಕೆಂದರೆ, ಅದರ ಯಾವ ಪ್ರವಾದನೆಯೂ ಎಂದೂ ಮಾನವ ಸಂಕಲ್ಪದಿಂದ
ಬಂದುದಲ್ಲ; 22ಆ ಮನುಷ್ಯರು ಪವಿತ್ರಾತ್ಮರಿಂದ ಪ್ರೇರಿತರಾಗಿ ದೇವರಿಂದ ಪಡೆದ ವಾಕ್ಯವನ್ನೇ
ಮಾತನಾಡಿದರು.

### ಕಳ್ಳಬೋಧಕರು

**2** ಇಸ್ರಯೇಲ್ ಜನರಲ್ಲೇ ಕಪಟ ಪ್ರವಾದಿಗಳು ಕಾಣಿಸಿಕೊಂಡರು. ಅಂತೆಯೇ, ನಿಮ್ಮಲ್ಲೂ
ಸುಳ್ಳುಬೋಧಕರು ಕಾಣಿಸಿಕೊಳ್ಳುವರು. ಹಾನಿಕರವಾದ ದುರ್ಬೋಧನೆಗಳನ್ನು ಗೋಪ್ಯವಾಗಿ ಪ್ರಸರಿಸುವರು.
ಒತ್ತೆಯಿಟ್ಟು ತಮ್ಮನ್ನು ರಕ್ಷಿಸಿದ ಒಡೆಯನನ್ನೇ ಅರಿಯೆವೆಂದು ನಿರಾಕರಿಸುವರು. ಹೀಗೆ ತಮ್ಮ ವಿನಾಶವನ್ನು
ತಾವೇ ಬೇಗನೆ ಬರಮಾಡಿಕೊಳ್ಳುವರು. 2ಇಷ್ಟಾದರೂ ಅವರ ಅನೈತಿಕ ಮಾರ್ಗವನ್ನೇ ಅನೇಕರು
ಅನುಸರಿಸುವರು. ಅವರ ದೆಸೆಯಿಂದ ಇತರರು ಸತ್ಯಮಾರ್ಗವನ್ನು ಅವಹೇಳನ ಮಾಡುವರು. 3ಅವರು
ದ್ರವ್ಯಾಶೆಪೀಡಿತರಾಗಿ ಕಟ್ಟುಕತೆಗಳನ್ನು ಹೇಳುತ್ತಾ ನಿಮ್ಮಿಂದ ಲಾಭಗಳಿಸುವರು. ದೀರ್ಘಕಾಲದಿಂದ

ಅವರಿಗಾಗಿ ಸಿದ್ಧವಾಗಿರುವ ದಂಡನೆಯ ತೀರ್ಪು ಸಮೀಪಿಸುತ್ತಿದೆ. ಅವರನ್ನು ನಾಶಗೊಳಿಸುವವರೇನೂ
ನಿದ್ರಿಸುತ್ತಿಲ್ಲ.
4 ಪಾಪಮಾಡಿದ ದೇವದೂತರನ್ನೂ ದೇವರು ದಂಡಿಸದೆ ಬಿಡಲಿಲ್ಲ. ಅವರನ್ನು ನರಕಕ್ಕೆ ದಬ್ಬಿದರು.
ಅಂತಿಮ ತೀರ್ಪಿನ ದಿನವನ್ನು ಎದುರು ನೋಡುತ್ತಾ ಕಾದಿರುವಂತೆ, ಕಾರಿರುಳ ಕೂಪದಲ್ಲಿ ಕೂಡಿಹಾಕಿದರು.
[5]ಪುರಾತನ ಕಾಲದ ಜನರನ್ನೂ ಸಹ ದೇವರು ದಂಡಿಸದೆ ಬಿಡಲಿಲ್ಲ. ನೀತಿ ಮಾರ್ಗವನ್ನು ಸಾರಿದ
ನೋವನನ್ನು ಮತ್ತು ಅವನೊಂದಿಗಿದ್ದ ಇತರ ಏಳು ಜನರನ್ನು ಮಾತ್ರ ಕಾಪಾಡಿ, ದುರ್ಜನರಿಂದ ಕೂಡಿದ್ದ
ಜಗತ್ತಿನ ಮೇಲೆ ಜಲಪ್ರಳಯವನ್ನು ಬರಮಾಡಿದರು. [6]ಸೊದೋಮ್ ಮತ್ತು ಗೊಮೋರ ಪಟ್ಟಣಗಳನ್ನು
ಕೂಡ ದೇವರು ಬಿಡಲಿಲ್ಲ. ದುರ್ಜನರಿಗೆ ಬರಲಿರುವ ದುರ್ಗತಿ ಏನೆಂದು ಸೂಚಿಸುವುದಕ್ಕಾಗಿ ಆ
ಪಟ್ಟಣಗಳನ್ನು ಸುಟ್ಟು ಭಸ್ಮಮಾಡಿದರು. [7]ಆದರೆ, ಆ ದುರ್ಜನರ ಅನೈತಿಕ ನಡುವಳಿಕೆಯನ್ನು ಕಂಡು
ಅತಿಯಾಗಿ ಮನನೊಂದಿದ್ದ ಲೋತ ಎಂಬ ಸತ್ಪುರುಷನನ್ನು ಸಂರಕ್ಷಿಸಿದರು. [8]ಆತನು ಆ ದುರ್ಜನರ
ನಡುವೆ ಬಾಳುತ್ತಾ ಅವರ ದುಷ್ಕೃತ್ಯಗಳನ್ನು ಕಂಡು ಕೇಳುತ್ತಿದ್ದಾಗ, ಅವನ ನಿರ್ಮಲ ಹೃದಯ ದಿನೇದಿನೇ
ಅತೀವ ವೇದನೆಯನ್ನು ಅನುಭವಿಸುತ್ತಿತ್ತು.
9 ಹೀಗೆ, ಸಜ್ಜನರನ್ನು ಸಂಕಟ ಶೋಧನೆಗಳಿಂದ ಸಂರಕ್ಷಿಸಲು, ದುರ್ಜನರನ್ನು ಅಂತಿಮ
ನ್ಯಾಯತೀರ್ಪಿನ ದಿನದವರೆಗೂ ಶಿಕ್ಷಾವಸ್ಥೆಯಲ್ಲಿರಿಸಲು ಪ್ರಭುವಿಗೆ ತಿಳಿದಿದೆ. [10]ಮುಖ್ಯವಾಗಿ ತುಚ್ಛವಾದ
ದೈಹಿಕ ವ್ಯಾಮೋಹಗಳಿಗೆ ಬಲಿಯಾಗಿರುವವರನ್ನು ಮತ್ತು ದೇವರ ಅಧಿಕಾರವನ್ನು ತೃಣೀಕರಿಸುವವರನ್ನು
ಅವರು ಶಿಕ್ಷಿಸದೆ ಬಿಡುವುದಿಲ್ಲ. [11]ಈ ಕಳ್ಳಬೋಧಕರು ಉದ್ಧಟರು, ಸ್ವೇಚ್ಛಾಪರರು, ಸ್ವರ್ಗ ನಿವಾಸಿಗಳನ್ನು
ದೂಷಿಸುವವರು. ದೇವದೂತರು ಶಕ್ತಿಯಲ್ಲಿ ಮತ್ತು ಪರಾಕ್ರಮದಲ್ಲಿ ಶ್ರೇಷ್ಠರಾಗಿದ್ದರೂ ಸಹ ಈ
ಸ್ವರ್ಗನಿವಾಸಿಗಳನ್ನು ಪ್ರಭುವಿನ ಮುಂದೆ ದೂಷಿಸುವುದೂ ಇಲ್ಲ, ಖಂಡಿಸುವುದೂ ಇಲ್ಲ. [12]ಸಹಜ
ಪ್ರವೃತ್ತಿಯಿಂದ ಬೇಟೆಗಾಗಿಯೂ ಕೊಲೆಗಾಗಿಯೂ ಹುಟ್ಟಿರುವ ವಿವೇಕಶೂನ್ಯ ಪ್ರಾಣಿಗಳಂತೆ ಬಾಳುವ ಈ
ದುರ್ಬೋಧಕರಾದರೋ ತಮಗೆ ತಿಳಿಯದವುಗಳನ್ನು ದೂಷಣೆ ಮಾಡುತ್ತಾರೆ. ಆ ಪ್ರಾಣಿಗಳು
ನಾಶವಾಗುವಂತೆಯೇ ಇವರೂ ನಾಶವಾಗುತ್ತಾರೆ. [13]ತಾವು ಮಾಡಿದ ಕೇಡಿಗೆ ಪ್ರತಿಯಾಗಿ ಕೇಡನ್ನೇ
ಪಡೆಯುತ್ತಾರೆ. ಇವರು ಹಾಡುಹಗಲಿನಲ್ಲೇ ಏನು ಬೇಕಾದರೂ ಮಾಡಿ, ದೈಹಿಕ ವ್ಯಾಮೋಹಗಳನ್ನು
ತಣಿಸುವುದೇ ಸುಖವೆಂದು ಎಣಿಸುತ್ತಾರೆ. ವಂಚಕರಾದ ಇವರು ಪ್ರೇಮಭೋಜನಗಳಲ್ಲಿ ನಿಮ್ಮ ಸಂಗಡ
ಸೇರಿ ತಿಂದುಕುಡಿಯುವಾಗ ನಿಮಗೆ ಕಳಂಕವನ್ನೂ ಮಾನನಷ್ಟವನ್ನೂ ತರುತ್ತಾರೆ. [14]ಇವರದು ಬರೀ
ಕಾಮುಕ ಕಣ್ಣು; ಇವರು ಎಂದಿಗೂ ಇಂಗದ ಪಾಪಬಯಕೆಯುಳ್ಳವರು; ದುರ್ಬಲರನ್ನು ವಂಚಿಸಿ
ವಶಪಡಿಸಿಕೊಳ್ಳುವುದೇ ಇವರ ಹವ್ಯಾಸ; ಲೋಭದಲ್ಲೇ ಪಳಗಿದ ಮನಸ್ಸುಳ್ಳವರು ಹಾಗೂ ಶಾಪಗ್ರಸ್ತ
ಸಂತಾನದವರು ಇವರು ! [15]ಇವರು ಹಾದಿ ತಪ್ಪಿದವರು, ಸನ್ಮಾರ್ಗವನ್ನು ತ್ಯಜಿಸಿದವರು; ಬೆಯೋರನ ಮಗ
ಬಿಳಾಮನ ದಾರಿಯನ್ನು ಹಿಡಿದವರು. [16]ಬಿಳಾಮನು ಅನೀತಿಯಿಂದ ಹಣಗಳಿಸಿದ ಲಾಭಕೋರ; ತನ್ನ
ಅಕ್ರಮಕ್ಕೆ ತಕ್ಕ ದಂಡನೆಯನ್ನು ಅನುಭವಿಸಿದವನು. ಮೂಕ ಹೇಸರಗತ್ತೆಯೊಂದು ಮಾನವನಂತೆ ಮಾತಾಡಿ
ಈ ಪ್ರವಾದಿಯ ಮೂರ್ಖತನಕ್ಕೆ ತಡೆಹಾಕಿತು.
17 ಈ ಕಳ್ಳಬೋಧಕರು ನೀರಿಲ್ಲದ ಬಾವಿಗಳು, ಬಿರುಗಾಳಿಯಿಂದ ಚದರಿಹೋಗುವ ಮಂಜು
ಮೋಡಗಳು. ಕಾರ್ಗತ್ತಲಿನ ಕಂದಕವೇ ಅವರ ಪಾಲಿಗೆ ಕಟ್ಟಿಟ್ಟ ಬುತ್ತಿ. [18]ದುರ್ಮಾರ್ಗಿಗಳ ಸಹವಾಸದಿಂದ
ಹೊಸದಾಗಿ ತಪ್ಪಿಸಿಕೊಂಡವರನ್ನು ಇವರು ಜಂಬದ ಸೊಕ್ಕು ಮಾತುಗಳಿಂದ, ಮೂರ್ಖ ಹೇಳಿಕೆಗಳಿಂದ,
ಭೋಗ–ವಿಲಾಸಗಳ ಬಲೆಯಿಂದ ವಶಪಡಿಸಿಕೊಳ್ಳುತ್ತಾರೆ. [19]ತಾವೇ ದುರಭ್ಯಾಸಗಳಿಗೆ ಗುಲಾಮರಾಗಿದ್ದರೂ
ತಾವು ವಶಪಡಿಸಿಕೊಂಡವರಿಗೆ ಸ್ವಾತಂತ್ರ್ಯವನ್ನು ತರುವ ಮಾತುಕೊಡುತ್ತಾರೆ. ಒಬ್ಬನು ಯಾವುದಕ್ಕೆ
ಸೋಲುತ್ತಾನೋ ಅದಕ್ಕೆ ಅವನು ಗುಲಾಮನಾಗುತ್ತಾನೆ. [20]ನಮ್ಮ ಪ್ರಭು ಹಾಗೂ ಉದ್ಧಾರಕರಾದ
ಯೇಸುಕ್ರಿಸ್ತರನ್ನು ಕುರಿತ ಜ್ಞಾನದ ಮೂಲಕ ಕೆಲವರು ಲೋಕದ ಕಲ್ಮಶದಿಂದ ಪಾರಾಗಿ ನಿರ್ಮಲರಾಗುತ್ತಾರೆ.
ಇಂಥವರು ಮರಳಿ ಅದರಲ್ಲೇ ಸಿಲುಕಿಕೊಂಡು ಅದಕ್ಕೆ ಗುಲಾಮರಾದರೆ ಅವರ ಅಂತಿಮ ಗತಿ ಮೊದಲ
ಗತಿಗಿಂತಲೂ ಅಧೋಗತಿಯಾಗಿರುತ್ತದೆ. [21]ಅವರು ನೀತಿಯ ಮಾರ್ಗವನ್ನು ಅರಿತುಕೊಂಡು ತಾವು
ಸ್ವೀಕರಿಸಿದ ಪವಿತ್ರ ಆಜ್ಞೆಯನ್ನು ತಿರಸ್ಕರಿಸುವುದಕ್ಕಿಂತ ಅದನ್ನು ಅರಿಯದವರಾಗಿದ್ದರೆ ಒಳ್ಳೆಯದಾಗುತ್ತಿತ್ತು.

22“ನಾಯಿ ತಾನು ಕಕ್ಕಿದ್ದನ್ನೇ ನೆಕ್ಕಲು ಹೋಯಿತು,” ಮತ್ತು “ಮೈ ತೊಳೆದ ಹಂದಿ ಕೊಳಚೆಯಲ್ಲಿ
ಹೊರಳಲು ಹೋಯಿತು,” ಎಂಬ ಈ ಗಾದೆಗಳು ಇವರಿಗೆ ಸರಿಯಾಗಿ ಅನ್ವಯಿಸುತ್ತವೆ.

### ಪ್ರಭುವಿನ ದಿನವು ಬಂದೇ ತೀರುವುದು

**3** ಪ್ರಿಯರೇ, ಈಗ ನಾನು ನಿಮಗೆ ಬರೆಯುತ್ತಿರುವುದು ಎರಡನೆಯ ಪತ್ರ. ಈ ಎರಡು ಪತ್ರಗಳಲ್ಲೂ ನಿಮ್ಮ
ನಿರ್ಮಲ ಮನಸ್ಸನ್ನು ಪುನಶ್ಚೇತನಗೊಳಿಸಲು ಪ್ರಯತ್ನಿಸಿದ್ದೇನೆ. 2ಪೂರ್ವಕಾಲದಲ್ಲಿ ಪವಿತ್ರ ಪ್ರವಾದಿಗಳು
ಹೇಳಿದ ಮಾತುಗಳನ್ನು ಮತ್ತು ಪ್ರೇಷಿತರ ಮೂಲಕ, ಲೋಕೋದ್ಧಾರಕರಾದ ನಮ್ಮ ಪ್ರಭು ಕೊಟ್ಟ
ಆಜ್ಞೆಗಳನ್ನು ನಿಮ್ಮ ಜ್ಞಾಪಕಕ್ಕೆ ತರಲು ಬಯಸಿದ್ದೇನೆ. 3ಮೊತ್ತಮೊದಲನೆಯದಾಗಿ ನೀವು ಇದನ್ನು
ನೆನಪಿನಲ್ಲಿಡಬೇಕು; ಅಂತ್ಯಕಾಲದಲ್ಲಿ ಕುಚೋದ್ಯಗಾರರು ಕಾಣಿಸಿಕೊಳ್ಳುವರು. 4ಇವರು ತಮ್ಮ ದುರಾಶೆಗಳಿಗೆ
ಬಲಿಯಾಗಿ, “ಆತನು ಮರಳಿ ಬರುವನು ಎಂಬ ವಾಗ್ದಾನವು ಏನಾಯಿತು? ನಮ್ಮ ಪಿತೃಗಳು ಮೃತರಾದರು;
ಅಂದಿನಿಂದ ಸಮಸ್ತವೂ ಲೋಕಾದಿಯಿಂದಲೂ ಇದ್ದ ಹಾಗೆಯೇ ಇದೆಯಲ್ಲಾ,” ಎಂದು ಅಪಹಾಸ್ಯ
ಮಾಡುವರು. 5ಆದರೆ, ಅವರು ಒಂದು ವಿಷಯವನ್ನು ಉದ್ದೇಶ ಪೂರ್ವಕವಾಗಿ ಮರೆತುಬಿಡುತ್ತಾರೆ.
ಅದೇನೆಂದರೆ, ಪ್ರಾರಂಭದಲ್ಲಿದ್ದ ಭೂಮ್ಯಾಕಾಶಗಳು ದೇವರ ವಾಕ್ಯದಿಂದಲೇ ಉಂಟಾದವು. ಜಲದಿಂದ,
ಜಲದ ಮೂಲಕ ಭೂಮಿ ಉಂಟಾಯಿತು. 6ಜಲಪ್ರಳಯದಿಂದಲೇ ಅಂದಿನ ಜಗತ್ತು ಮುಳುಗಿ
ನಾಶವಾಯಿತು. 7ಈಗಿರುವ ಭೂಮ್ಯಾಕಾಶಗಳನ್ನು ಅದೇ ವಾಕ್ಯದ ಬಲದಿಂದ ಅಗ್ನಿನಾಶಕ್ಕಾಗಿ
ಕಾದಿರಿಸಲಾಗಿದೆ. ದುರ್ಜನರು ವಿನಾಶವಾಗಬೇಕಾದ ನ್ಯಾಯತೀರ್ಪಿನ ದಿನದವರೆಗೂ ಇವನ್ನು
ಉಳಿಸಲಾಗಿದೆ.

8 ಪ್ರಿಯರೇ, ಮತ್ತೊಂದು ವಿಷಯವನ್ನು ಮರೆಯದಿರಿ: ಪ್ರಭುವಿನ ದೃಷ್ಟಿಯಲ್ಲಿ ಒಂದು ದಿನ
ಸಾವಿರ ವರ್ಷಗಳಂತೆಯೂ ಮತ್ತು ಸಾವಿರ ವರ್ಷಗಳು ಒಂದು ದಿನದಂತೆಯೂ ಇವೆ. 9ಕೆಲವರು
ಭಾವಿಸುವಂತೆ ಪ್ರಭು ತಮ್ಮ ವಾಗ್ದಾನಗಳನ್ನು ನೆರವೇರಿಸುವುದರಲ್ಲಿ ವಿಳಂಬ ಮಾಡುವವರಲ್ಲ; ಆದರೆ
ಅವರು ನಿಮ್ಮ ವಿಷಯದಲ್ಲಿ ದೀರ್ಘಶಾಂತಿ, ಸಹನೆಯುಳ್ಳವರು. ಯಾರೊಬ್ಬನೂ ನಾಶವಾಗಬೇಕೆಂಬುದು
ಅವರ ಇಚ್ಛೆಯಲ್ಲ; ಎಲ್ಲರೂ ಪಶ್ಚಾತ್ತಾಪಪಟ್ಟು ತಮಗೆ ಅಭಿಮುಖರಾಗಬೇಕೆಂಬುದೇ ಅವರ ಅಪೇಕ್ಷೆ.

10 ಪ್ರಭುವಿನ ದಿನ ಬಂದೇ ತೀರುವುದು. ಅದು ಕಳ್ಳನಂತೆಯೇ ಬರುವುದು. ಆಗ, ಆಕಾಶ
ಮಂಡಲವು ಸಿಡಿಲ ಗರ್ಜನೆಯೊಂದಿಗೆ ಅಳಿದು ಹೋಗುವುದು. ಸೂರ್ಯ, ಚಂದ್ರ, ನಕ್ಷತ್ರ, ಗ್ರಹಗಳು
ಸುಟ್ಟು ಲಯವಾಗಿ ಹೋಗುವುವು. ಭೂಮಿಯೂ ಅದರಲ್ಲಿರುವ ಸಮಸ್ತವೂ ಉರಿದು ಭಸ್ಮವಾಗುವುವು.
11ಇವೆಲ್ಲವೂ ಹೀಗೆ ನಾಶವಾಗಿ ಹೋಗುವುದರಿಂದ ನೀವು ಎಂಥವರಾಗಿ ಜೀವಿಸಬೇಕು?
ಪರಿಶುದ್ಧರಾಗಿಯೂ ಭಕ್ತಿಪೂರಿತರಾಗಿಯೂ ಬಾಳಬೇಕು. 12ದೇವರ ಆ ದಿನವನ್ನು ಎದುರು ನೋಡುತ್ತಾ
ಅದು ಬೇಗನೆ ಬರಲೆಂದು ಹಾರೈಸಬೇಕು. ಆ ದಿನ, ಆಕಾಶಮಂಡಲವು ಅಗ್ನಿಯಿಂದ ಉರಿದು
ಹೋಗುವುದು; ಸೂರ್ಯ, ಚಂದ್ರ, ನಕ್ಷತ್ರ, ಗ್ರಹಗಳು ಶಾಖದಿಂದ ಕರಗಿಹೋಗುವುವು. 13ನಾವಾದರೋ,
ದೇವರ ವಾಗ್ದಾನದ ಪ್ರಕಾರ ನೀತಿಯ ನೆಲೆಯಾಗಿರುವ ನೂತನ ಆಕಾಶಮಂಡಲವೂ ನೂತನ
ಭೂಮಂಡಲವೂ ಬರುವುದನ್ನು ಎದುರು ನೋಡುತ್ತಿರುವೆವು.

14 ಪ್ರಿಯರೇ, ಇವುಗಳನ್ನು ಎದುರುನೋಡುವವರಾಗಿರುವ ನೀವು ದೇವರ ದೃಷ್ಟಿಯಲ್ಲಿ
ನಿರ್ಮಲರೂ ನಿರ್ದೋಷಿಗಳೂ ಆಗಿದ್ದು ಶಾಂತಿ ಸಮಾಧಾನದಿಂದಿರಲು ಪ್ರಯತ್ನಿಸಿರಿ. 15ನಮ್ಮ ಪ್ರಭುವಿನ
ದೀರ್ಘಶಾಂತಿ ಹಾಗೂ ಸಹನೆ ನಮ್ಮ ಜೀವೋದ್ಧಾರಕ್ಕಾಗಿಯೇ ಎಂದು ತಿಳಿದುಕೊಳ್ಳಿ. ನಮ್ಮ ಪ್ರಿಯ
ಸಹೋದರನಾದ ಪೌಲನೂ ಸಹ ತನಗೆ ದೇವರಿತ್ತ ಜ್ಞಾನದ ಪ್ರಕಾರ ಹೀಗೆಯೇ ನಿಮಗೆ ಬರೆದಿದ್ದಾನೆ.
16ಆತನು ತನ್ನ ಪತ್ರಗಳಲ್ಲಿ ಈ ವಿಷಯವನ್ನು ಕುರಿತು ಪ್ರಸ್ತಾಪಿಸುವಾಗಲೆಲ್ಲಾ ಹೀಗೆಯೇ ಬೋಧಿಸಿದ್ದಾನೆ.
ಅರ್ಥ ಮಾಡಿಕೊಳ್ಳಲು ಕಠಿಣವಾದ ಕೆಲವು ವಿಷಯಗಳು ಆತನ ಪತ್ರಗಳಲ್ಲಿ ಇವೆ. ಬುದ್ಧಿಹೀನರು ಹಾಗು

ಚಂಚಲಚಿತ್ತರು ಪವಿತ್ರಗ್ರಂಥದ ಇತರ ಭಾಗಗಳಿಗೆ ಅಪಾರ್ಥ ಕಟ್ಟುವಂತೆ ಇವುಗಳಿಗೂ ಕಟ್ಟುತ್ತಾರೆ. ಹೀಗೆ, ತಮ್ಮ ವಿನಾಶವನ್ನು ತಾವೇ ತಂದುಕೊಳ್ಳುತ್ತಾರೆ.

17 ಆದಕಾರಣ ಪ್ರಿಯರೇ, ಈ ವಿಷಯಗಳನ್ನು ಮುಂಚಿತವಾಗಿಯೇ ತಿಳಿದುಕೊಂಡಿರುವ ನೀವು ಎಚ್ಚರಿಕೆಯಿಂದಿರಿ. ದುರ್ಜನರ ದುರ್ಬೋಧನೆಗೆ ಮರುಳಾಗದಿರಿ. ನಿಮ್ಮ ಸ್ಥಿರ ವಿಶ್ವಾಸವನ್ನು ಬಿಟ್ಟು ಭ್ರಷ್ಟರಾಗದಿರಿ. [18]ನಮ್ಮ ಪ್ರಭು ಮತ್ತು ಉದ್ಧಾರಕರಾದ ಯೇಸುಕ್ರಿಸ್ತರ ಅನುಗ್ರಹದಲ್ಲೂ ಅವರನ್ನು ಕುರಿತ ಜ್ಞಾನದಲ್ಲೂ ನೀವು ಅಭಿವೃದ್ಧಿಹೊಂದಿರಿ. ಅವರಿಗೆ ಈಗಲೂ ಯುಗ ಯುಗಾಂತರಕ್ಕೂ ಮಹಿಮೆಯುಂಟಾಗಲಿ ! ಆಮೆನ್.